## ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 913
2. ಮಾನ್ಯ ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ
3. ಉತ್ತರಿಸಬೇಕಾದ ದಿನಾಂಕ : 21.12.2021
4. ಉತ್ತರಿಸುವ ಸಚಿವರು : ಸಹಕಾರ ಸಚಿವರು

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ | ಎ.ಪಿ.ಎಂ.ಸಿ ಮಾರುಕಟ್ಟೆ ಕಾಯ್ದೆಗೆ ತಿದ್ದುಪಡಿ ತಂದ ನಂತರ ರಾಜ್ಯದಲ್ಲಿ ಎ.ಪಿ.ಎಂ.ಸಿ.ಗಳಲ್ಲಿ ವ್ಯಾಪಾರ ವಹಿವಾಟುಗಳು ತೀರಾ ಕಡಿಮೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ | ಇದರಿಂದ ರೈತ ಸಮುದಾಯ ತೊಂದರೆಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ 1966 ಕಾಯ್ದೆ ಸಂಖ್ಯೆ:59/2020ರ ಮೂಲಕ ಕಲಂ 8(2) ಹಾಗೂ ಕಲಂ 117ಕ್ಕೆ ತಿದ್ದುಪಡಿ ಮಾಡಿ ಅಧಿಸೂಚಿತ ಕೃಷಿ ಉತ್ಪನ್ನಗಳನ್ನು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಪ್ರಾಂಗಣದಲ್ಲಿಯೇ ಮಾರಾಟ ಮಾಡಬೇಕೆಂಬ ನಿರ್ಬಂಧ ತೆರವುಗೊಳಿಸಲಾಗಿದೆ ಹಾಗೂ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ (ಎಪಿಎಂಸಿ) ನಿಯಂತ್ರಣವನ್ನು ಪ್ರಾಂಗಣಕ್ಕೆ ಸೀಮಿತಗೊಳಿಸಿದೆ. ಕಲಂ 8(2)ರ ಉಲ್ಲಂಘನೆಗೆ ದಂಡ ಮತ್ತು ಸಜೆ ಶಿಕ್ಷೆಯನ್ನು ವಿಧಿಸುತ್ತಿದ್ದ ಕಲಂ 117ನ್ನು ಕೈಬಿಡಲಾಗಿದೆ.<br><br>ಕಾಯ್ದೆ ತಿದ್ದುಪಡಿಯ ನಂತರ ರಾಜ್ಯದಲ್ಲಿನ ರೈತರು ಬೆಳೆದ ಕೃಷಿ ಉತ್ಪನ್ನಗಳನ್ನು ಹಿಂದಿನಂತೆ ಪ್ರಾಂಗಣದಲ್ಲಿ, ಲೈಸೆನ್ಸ್ ಹೊಂದಿರುವ ನೇರ ಖರೀದಿ ಕೇಂದ್ರ, ರೈತ–ಗ್ರಾಹಕ ಮಾರುಕಟ್ಟೆ ಪ್ರಾಂಗಣ, ಖಾಸಗಿ ಮಾರುಕಟ್ಟೆ ಪ್ರಾಂಗಣಗಳಲ್ಲಿ ಅಥವಾ ತಮ್ಮ ಹೊಲದಲ್ಲೇ ತಮ್ಮ ಇಚ್ಛೆಯಂತೆ ಮಾರಾಟ ಮಾಡಲು ಅವಕಾಶ ಲಭ್ಯವಾಗಿದೆ. ಹಾಗಾಗಿ ರೈತ ಸಮುದಾಯಕ್ಕೆ ಅನುಕೂಲವಾಗಿದೆ. ರೈತರು ತೊಂದರೆಗೊಳಗಾಗಿರುವುದು ಕಂಡುಬಂದಿರುವುದಿಲ್ಲ. |
| ಇ | ಖಾಸಗಿ ವ್ಯಾಪಾರಿಗಳಿಂದ ವಂಚನೆಗೊಳಗಾದ ರೈತರು ನೀಡಿರುವ ದೂರುಗಳ ಸಂಖ್ಯೆ ಎಷ್ಟು; ಈ ಸಂಬಂಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ರೈತರಿಂದ ಯಾವುದೇ ದೂರುಗಳು ಸ್ವೀಕೃತಗೊಂಡಿರುವುದಿಲ್ಲ. |
| ಈ | ಎ.ಪಿ.ಎಂ.ಸಿ.ಗಳು ಆರ್ಥಿಕ ನಷ್ಟ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ |
| ಉ | ಸರ್ಕಾರದ ವತಿಯಿಂದ ಆರ್ಥಿಕ ನಷ್ಟ ಸರಿದೂಗಿಸಲು ತೆಗೆದುಕೊಂಡ ಕ್ರಮಗಳೇನು? | ಈ ಹಿಂದೆ ರಾಜ್ಯ ಸರ್ಕಾರವು ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ 1966ರ ಕಾಯ್ದೆಯಡಿ ಸ್ಥಾಪಿತವಾಗಿರುವ ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣಗಳಲ್ಲಿ ನಡೆಯುವ ವಹಿವಾಟಿಗೆ ಕಾಯ್ದೆ ಕಲಂ 65(2)ರ ಮೇರೆಗೆ ಶೇ.1.5 ಹಾಗೂ ಶೇ.1 ರಂತೆ ಮಾರುಕಟ್ಟೆ ಶುಲ್ಕ ಮತ್ತು ಬಳಕೆದಾರರ ಶುಲ್ಕ ಆಕರಣೆಗೆ ಅವಕಾಶಿಸಲಾಗಿತ್ತು. ಶೇ.1.5ರ ಮಾರುಕಟ್ಟೆ ಶುಲ್ಕ ಮರು ಹಂಚಿಕೆ ವಿವರಗಳು ಈ ಕೆಳಕಂಡಂತ್ತಿದೆ.<br><br>ಕ್ರ.ಸಂ / ವಿವರ / ಶೇಕಡವಾರು<br>1. / ರಾಜ್ಯ ಸಂಚಿತ ನಿಧಿಗೆ ವಂತಿಗೆ / 0.20<br>2. / ರಾಜ್ಯ ಕೃಷಿ ಮಾರಾಟ ಮಂಡಳಿಗೆ ವಂತಿಗೆ / 0.05 |

| | | |
|---|---|---|
| 3. | ಅಡಮಾನ ಸಾಲ ಯೋಜನೆ | 0.10 |
| 4. | ಕೃಷಿ ವಿಶ್ವವಿದ್ಯಾಲಯಗಳ ವಂತಿಗೆ | 0.01 |
| 5. | ಆಪತ್ಧನ | 0.04 |
| 6. | ಅಭಿವೃದ್ಧಿ ವೆಚ್ಚಗಳು | 0.25 |
| 7. | ಶಾಸನೇತರ ವೆಚ್ಚಗಳು | 0.25 |
| 8. | ರೆಮ್ಸ್ ಸಂಸ್ಥೆ ವಹಿವಾಟು ವೆಚ್ಚ | 0.10 |
| 9. | ಆವರ್ತ ನಿಧಿ | 0.40 |
| 10. | ಮಾರುಕಟ್ಟೆ ಸುಧಾರಣಾ ನಿಧಿ | 0.10 |

ಇದರಂತೆ, ಮಾರುಕಟ್ಟೆ ಸಮಿತಿಗಳಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿ/ಸಿಬ್ಬಂದಿಗಳ ವೇತನ ಭತ್ಯೆ, ಇತರೆ ಭತ್ಯೆ, ಮಾರುಕಟ್ಟೆ ಸಮಿತಿಗಳ ಚುನಾವಣೆ ವೆಚ್ಚ ಮುಂತಾದ ಬಾಬ್ತುಗಳಿಗೆ ತಗಲುವ ವೆಚ್ಚವನ್ನು ಮಾರುಕಟ್ಟೆ ಕಾಯ್ದೆ ಕಲಂ 91ರ ಮೇರೆಗೆ ಇಲಾಖಾ ನಿರ್ದೇಶಕರು ನಿಗಧಿಪಡಿಸುವ ದರದಲ್ಲಿ ಮಾರುಕಟ್ಟೆ ಸಮಿತಿಗಳು ರಾಜ್ಯ ಸಂಚಿತ ನಿಧಿಗೆ ವಂತಿಗೆ ರೂಪದಲ್ಲಿ ಪಾವತಿಸಬೇಕಿತ್ತು. ಕಾಯ್ದೆ ಕಲಂ 64–ಬಿರ ಮೇರೆಗೆ ರಾಜ್ಯ ಸರ್ಕಾರವು ಸ್ಥಾಪಿಸಿರುವ ಆವರ್ತ ನಿಧಿಗೆ ಜಮೆ ಮಾಡಬೇಕಿತ್ತು.

ಮಾರುಕಟ್ಟೆ ಸಮಿತಿಗಳು ಆಕರಿಸುವ ಮಾರುಕಟ್ಟೆ ಶುಲ್ಕ/ಬಳಕೆದಾರರ ಶುಲ್ಕವನ್ನು ಶೇ.0.60ಕ್ಕೆ ನಿಗಧಿಪಡಿಸಿದೆ ಹಾಗೂ ರಾಜ್ಯ ಸಂಚಿತ ನಿಧಿಗೆ ಸಮಿತಿಗಳಿಂದ ಪಾವತಿಸಬೇಕಿದ್ದ ವಂತಿಗೆಗೆ ವಿನಾಯಿತಿ ನೀಡಿ ಈ ವೆಚ್ಚವನ್ನು ಸರ್ಕಾರವೆ ಭರಿಸಲು ಕ್ರಮವಹಿಸಿದೆ.

ರಾಜ್ಯ ಸರ್ಕಾರವು ನಿಗಧಿಪಡಿಸಿದ ಶೇ.0.60 ಮಾರುಕಟ್ಟೆ ಶುಲ್ಕ/ಬಳಕೆದಾರರ ಶುಲ್ಕದಲ್ಲಿ ಈ ಕೆಳಕಂಡಂತೆ ಮರು ಹಂಚಿಕೆ ಮಾಡಿ ನಿಗಧಿಪಡಿಸಲಾಗಿದೆ.

1. ಆವರ್ತ ನಿಧಿ – ಶೇ.0.10
2. ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಗೆ ವಂತಿಗೆ – ಶೇ.0.05
3. ಪ್ರಾಂಗಣದಲ್ಲಿ ಮೂಲಭೂತ ಸೌಕರ್ಯ, ಪ್ರಾಂಗಣ ನಿರ್ವಹಣೆ ಮತ್ತು ಸಮಿತಿ ಆಡಳಿತ ವೆಚ್ಚ – ಶೇ.0.44
4. ರೆಮ್ಸ್ ಸಂಸ್ಥೆಗೆ ವಹಿವಾಟು ಶುಲ್ಕ – ಶೇ.0.01

ಸಂಖ್ಯೆ: ಸಿಒ 321 ಎಂಆರ್ಇ 2021

(ಎಸ್.ಟಿ. ಸೋಮಶೇಖರ್)
ಸಹಕಾರ ಸಚಿವರು